**Akashvani : Bangalore**
**National Bulletin In Kannada**
**14.09.2024 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**14.09.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಇಂದು ಹಿಂದಿ ದಿವಸ ಹಿನ್ನೆಲೆಯಲ್ಲಿ ನಾಲ್ಕನೇ ಅಖಿಲ ಭಾರತೀಯ ರಾಜ ಭಾಷ ಸಮ್ಮೇಳನ

೨. ಬಾಸ್ಮತಿ ಅಕ್ಕಿ ರಫ್ತು; ನಿಯಮ ಸಡಿಲಿಸಿದ ಕೇಂದ್ರ ಸರ್ಕಾರ

೩. ಪೋರ್ಟ್‌ಬ್ಲೇರ್‌ಗೆ ಶ್ರೀ ವಿಜಯಪುರಂ ಎಂದು ಮರು ನಾಮಕರಣ

೪. ಪುರುಷರ ಏಷ್ಯನ್ ಚಾಂಪಿಯನ್ಸ್ ಹಾಕಿ ಟ್ರೋಫಿ; ಇಂದು ಭಾರತ- ಪಾಕಿಸ್ತಾನ ಮುಖಾಮುಖಿ

೫. ಡೈಮಂಡ್ ಲೀಗ್ ಫೈನಲ್; ಜಾವೆಲಿನ್ ಸ್ಪರ್ಧೆಯಲ್ಲಿ ನೀರಜ್ ಚೋಪ್ರಾ ಭಾಗಿ

**<><*<><>*><>**

ರಾಜ ಭಾಷೆಯ ವಜ್ರ ಮಹೋತ್ಸವದ ಹಿನ್ನೆಲೆಯಲ್ಲಿ ಇಂದು ನವದೆಹಲಿಯಲ್ಲಿ ನಾಲ್ಕನೇ ಅಖಿಲ ಭಾರತೀಯ ರಾಜ ಭಾಷ ಸಮ್ಮೇಳನ ನಡೆಯಲಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಸಮ್ಮೇಳನ ಉದ್ಘಾಟಿಸಲಿದ್ದಾರೆ. ಹಿಂದಿ ಅಧಿಕೃತ ಭಾಷೆಯಾಗಿ ಘೋಷಣೆಯಾಗಿ ೭೫ ವರ್ಷ ತುಂಬಿದ್ದು, ಇದರ ನೆನಪಿಗಾಗಿ ಅಧಿಕೃತ ಭಾಷಾ ಇಲಾಖೆ ಸಮ್ಮೇಳನ ಆಯೋಜಿಸಿದೆ. ಅಮಿತ್ ಶಾ ಅವರು, ರಾಜ ಭಾಷೆ ಕುರಿತ ೭೫ನೇ ವರ್ಷದ ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಲಿದ್ದಾರೆ. ನಂತರ ರಾಜ ಭಾಷ ಗೌರವ್ ಮತ್ತು ರಾಜ ಭಾಷ ಕೀರ್ತಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಇದೇ ವೇಳೆ ಹಿಂದಿ ದಿನದ ಪ್ರಯುಕ್ತ ಅಮಿತ್ ಶಾ ದೇಶದ ಜನತೆಗೆ ಶುಭ ಕೋರಿದ್ದಾರೆ.

**<><*<><>*><>**

ಬಾಸ್ಮತಿ ಅಕ್ಕಿಯನ್ನು ರಫ್ತು ಮಾಡಲು ನೋಂದಣಿ-ಕಮ್-ಹಂಚಿಕೆ ಪ್ರಮಾಣಪತ್ರಗಳನ್ನು ನೀಡಲು ಸರ್ಕಾರವು ಪ್ರತಿ ಟನ್‌ಗೆ ಕನಿಷ್ಠ ರಫ್ತು ಬೆಲೆ ೯೫೦ ಡಾಲರ್‌ಗಳ ನಿಯಮವನ್ನು ತೆಗೆದುಹಾಕಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಉತ್ತಮ ಗುಣಮಟ್ಟದ ಅಕ್ಕಿಯನ್ನು ರಫ್ತು ಮಾಡುವುದರಿಂದ ರೈತರ ಆದಾಯ ಹೆಚ್ಚುತ್ತದೆ. ಇದರಿಂದ ರಫ್ತು ವೃದ್ಧಿಯಾಗುವುದರ ಜೊತೆಗೆ ರೈತರ ಆದಾಯವೂ ಅಧಿಕವಾಗಲಿದೆ. ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕೈಗೊಂಡಿರುವ ಈ ನಿರ್ಧಾರ, ರೈತರ ಬಗೆಗಿನ ಕಾಳಜಿಯನ್ನು ತೋರುತ್ತದೆ ಎಂದು ಹೇಳಿದ್ದಾರೆ. ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯವು ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಅಭಿವೃದ್ಧಿ ಪ್ರಾಧಿಕಾರಕ್ಕೆ ಬಾಸ್ಮತಿ ಅಕ್ಕಿ ರಫ್ತಿಗೆ

ಯಾವುದೇ ವಾಸ್ತವಿಕವಲ್ಲದ ಬೆಲೆಗಳಿಗೆ ರಫ್ತು ಒಪ್ಪಂದವನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುವಂತೆ ಸೂಚಿಸಿದೆ.

<><*<><>*><>

ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ ಪ್ರಮುಖ ಪಟ್ಟಣವಾಗಿರುವ ಪೋರ್ಟ್ ಬ್ಲೇರ್ ಹೆಸರನ್ನು ಶ್ರೀ ವಿಜಯಪುರಮ್ ಎಂದು ಬದಲಿಸಲು ಕೇಂದ್ರ ಗೃಹ ಸಚಿವಾಲಯ ನಿರ್ಧರಿಸಿದೆ. ಗೃಹ ಸಚಿವ ಅಮಿತ್ ಶಾ ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ. ವಸಾಹತುಶಾಹಿ ಗುರುತುಗಳಿಗೆ ಮುಕ್ತಿ ನೀಡುವ ಪ್ರಧಾನಿ ನರೇಂದ್ರ ಮೋದಿ ಅವರ ಸಂಕಲ್ಪಕ್ಕೆ ಪೂರಕವಾಗಿ ಪೋರ್ಟ್ ಬ್ಲೇರ್‌ಗೆ ಹೊಸ ನಾಮಧೇಯ ನೀಡಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದ್ದಾರೆ. ದೇಶದ ಸ್ವಾತಂತ್ರ್ಯ ಹೋರಾಟದ ಇತಿಹಾಸದಲ್ಲಿ ಅಂಡಮಾನ್ ಮತ್ತು ನಿಕೋಬಾರ್ ದ್ವೀಪಕ್ಕೆ ಮಹತ್ವದ ಸ್ಥಾನವಿದೆ. ಶ್ರೀ ವಿಜಯಪುರಮ್ ಹೆಸರು ಸ್ವಾತಂತ್ರ್ಯ ಸಂಗ್ರಾಮದಲ್ಲಿ ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ ಕೊಡುಗೆಯನ್ನು ಗುರುತಿಸಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಚೋಳ ಸಾಮ್ರಾಜ್ಯದ ನೌಕಾಸೇನೆಯ ಪ್ರಮುಖ ನೆಲೆಯಾಗಿದ್ದ ಈ ದ್ವೀಪ, ಇಂದು ದೇಶದ ಭದ್ರತೆ ಮತ್ತು ಅಭಿವೃದ್ಧಿಗೆ ವೇಗ ನೀಡಲು ಸಿದ್ಧವಾಗಿದೆ. ನೇತಾಜಿ ಸುಭಾಷ್ ಚಂದ್ರ ಬೋಸ್ ಅವರು ಮೊಟ್ಟ ಮೊದಲ ಬಾರಿಗೆ ಇಲ್ಲಿ ರಾಷ್ಟ್ರಧ್ವಜವನ್ನು ಹಾರಿಸಿದ್ದರು ಹಾಗೂ ಸೆಲ್ಯುಲರ್ ಜೈಲಿನಲ್ಲಿ ವೀರ್ ಸಾವರ್ಕರ್ ಹಾಗೂ ಇತರೆ ಸ್ವಾತಂತ್ರ್ಯ ಸೇನಾನಿಗಳು ಭಾರತ ಮಾತೆಯ ಸ್ವಾತಂತ್ರ್ಯಕ್ಕಾಗಿ ಸಂಘರ್ಷ ನಡೆಸಿದ್ದರು ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

<><*<><>*><>

ಕರ್ನಾಟಕದಲ್ಲಿ ಕೆಪಿಎಸ್‌ಸಿ ಗ್ರೂಪ್ 'ಬಿ' ಹುದ್ದೆಗಳಿಗೆ ಇಂದು ಮತ್ತು ನಾಳೆ ನಡೆಯಬೇಕಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಮುಂದೂಡಲಾಗಿದೆ ಎಂದು ಕೆಪಿಎಸ್‌ಸಿ ಪ್ರಕಟಣೆ ತಿಳಿಸಿದೆ. ಎಲ್ಲ ಪ್ರವರ್ಗಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ ಮೂರು ವರ್ಷಗಳ ಸಡಿಲಿಕೆ ಮಾಡಿ ಆದೇಶ ಜಾರಿ ಮಾಡಲಾಗಿದೆ. ಹೀಗಾಗಿ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ನೀಡಬೇಕಾಗಿದೆ. ಶನಿವಾರ ಕನ್ನಡ ಭಾಷಾ ಪರೀಕ್ಷೆ ಮತ್ತು ಭಾನುವಾರ ನಡೆಯಬೇಕಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಮುಂದೂಡಲಾಗಿದೆ. ಸದರಿ ಅಧಿಸೂಚನೆಯಲ್ಲಿನ ಹುದ್ದೆಗಳಿಗೆ ಇತರೆ ದಿನಾಂಕಗಳಲ್ಲಿ ನಿಗದಿಪಡಿಸಲಾಗಿದ್ದ ನಿರ್ದಿಷ್ಟ ಪತ್ರಿಕೆಗಳ ಸ್ಪರ್ಧಾತ್ಮಕ ಪರೀಕ್ಷೆಗಳನ್ನೂ ಸಹ ಮುಂದೂಡಲಾಗಿದೆ. ಹೊಸದಾಗಿ ಅರ್ಜಿ ಸಲ್ಲಿಸಲು ಕಾಲಾವಕಾಶ ಮುಗಿದ ನಂತರ ಪರೀಕ್ಷೆಗೆ ಪರಿಷ್ಕೃತ ವೇಳಾಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ಆಯೋಗ ತಿಳಿಸಿದೆ.

<><*<><>*><>

ಕೇಂದ್ರ ಸರ್ಕಾರದ ಎನ್‌ಪಿಎಸ್ ವಾತ್ಸಲ್ಯ ಯೋಜನೆಗೆ ಕೇಂದ್ರ ಹಣಕಾಸು ಮತ್ತು ಸಾಂಸ್ಥಿಕ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್, ಈ ತಿಂಗಳ ೧೮ ರಂದು ಬೆಂಗಳೂರಿನಲ್ಲಿ ಚಾಲನೆ ನೀಡಲಿದ್ದಾರೆ. ಜೆ.ಸಿ. ರಸ್ತೆಯ ಕೆನರಾ ಬ್ಯಾಂಕ್ ಮುಖ್ಯ ಕಚೇರಿಯಲ್ಲಿ ಆಯೋಜಿಸಲಾಗುವ ಸಮಾರಂಭದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಪಾಲ್ಗೊಂಡು ಯೋಜನೆಯನ್ನು ಉದ್ಘಾಟಿಸಲಿದ್ದಾರೆ ಎಂದು ಕೆನರಾ ಬ್ಯಾಂಕ್ ಪ್ರಕಟಣೆ ತಿಳಿಸಿದೆ.

<><*<><>*><>

ಪ್ರಧಾನ ಮಂತ್ರಿ ಆವಾಸ್ ಯೋಜನೆಯ ಮೊದಲ ಕಂತನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಜಾರ್ಖಂಡ್‌ನ ಫಲಾನುಭವಿಗಳ ಖಾತೆಗಳಿಗೆ ನಾಳೆ ಜೆಮ್‌ಶೆಡ್‌ಪುರದಲ್ಲಿ ನಡೆಯುವ ಸಮಾರಂಭದಲ್ಲಿ ವರ್ಗಾಯಿಸಲಿದ್ದಾರೆ. ಈ ಕುರಿತು ಮಾಹಿತಿ ನೀಡಿದ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಜಾರ್ಖಂಡ್‌ನ ಸುಮಾರು ೨೦ ಸಾವಿರ ಫಲಾನುಭವಿಗಳಿಗೆ ಪ್ರಧಾನಿಯವರು ಮಂಜೂರಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಅಲ್ಲದೇ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಐದು ಕೋಟಿಗೂ ಹೆಚ್ಚು ಹಣ ವರ್ಗಾವಣೆಯಾಗಲಿದೆ. ನೂತನವಾಗಿ ನಿರ್ಮಿಸಿರುವ ೪೬ ಸಾವಿರ ಫಲಾನುಭವಿಗಳ ಮನೆಗಳ ಗೃಹಪ್ರವೇಶ ಸಮಾರಂಭವೂ ನಡೆಯಲಿದೆ ಎಂದು ತಿಳಿಸಿದ್ದಾರೆ. ಮಾದರಿ ನೀತಿ ಸಂಹಿತೆ ಅನ್ವಯವಾಗದ ಗುಜರಾತ್‌ನಲ್ಲಿರುವ ಫಲಾನುಭವಿಗಳಿಗೆ ಸೋಮವಾರ ಮತ್ತು ಒಡಿಶಾ ಸೇರಿದಂತೆ ಇತರೆ ಎಲ್ಲ ರಾಜ್ಯಗಳ ಫಲಾನುಭವಿಗಳಿಗೆ ಮಂಗಳವಾರ ಪ್ರಧಾನಿ, ಈ ಯೋಜನೆಯ ಮೊದಲ ಕಂತನ್ನು ವರ್ಗಾಯಿಸಲಿದ್ದಾರೆ ಎಂದು ಕೇಂದ್ರ ಸಚಿವರು ಮಾಹಿತಿ ನೀಡಿದರು. ಅರ್ಹ ಫಲಾನುಭವಿಗಳನ್ನು ಪಟ್ಟಿಯಲ್ಲಿ ಸೇರಿಸುವ ಮೂಲಕ ಮನೆಗಳ ಹಂಚಿಕೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿರುವ ಆವಾಸ್ ಪ್ಲಸ್ ೨೦೨೪ ಅಪ್ಲಿಕೇಶನ್ ಅನ್ನು ಸಹ ಪ್ರಧಾನಿ ನರೇಂದ್ರ ಮೋದಿ ಅವರು ಅನಾವರಣಗೊಳಿಸಲಿದ್ದಾರೆ ಎಂದು ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದರು.

<><*<><>*><>

ಕೇಂದ್ರ ಗೃಹ ಸಚಿವ ಅಮಿತ್ ಶಾ ನಿನ್ನೆ ನವದೆಹಲಿಯಲ್ಲಿ ೭ನೇ ರಾಷ್ಟ್ರೀಯ ಭದ್ರತಾ ಕಾರ್ಯತಂತ್ರಗಳ ಸಮ್ಮೇಳನ ೨೦೨೪ ಅನ್ನು ಉದ್ಘಾಟಿಸಿದರು. ಎರಡು ದಿನಗಳ ಸಮ್ಮೇಳನದಲ್ಲಿ, ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳು, ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳು ಮತ್ತು ಕೇಂದ್ರ ಪೊಲೀಸ್ ಸಂಸ್ಥೆಗಳ ಉನ್ನತ ಪೊಲೀಸ್ ಅಧಿಕಾರಿಗಳೊಂದಿಗೆ ಉದಯೋನ್ಮುಖ ರಾಷ್ಟ್ರೀಯ ಭದ್ರತಾ ಸವಾಲುಗಳನ್ನು ಎದುರಿಸಲು ಸರ್ಕಾರವು ಮಾರ್ಗಸೂಚಿಯನ್ನು ರೂಪಿಸಲಿದೆ. ಅಮಿತ್ ಶಾ ಅವರು ಡಿಜಿಪಿ ಮತ್ತು ಐಜಿಪಿ ಸಮ್ಮೇಳನದ ಶಿಫಾರಸುಗಳ ಡ್ಯಾಶ್‌ಬೋರ್ಡ್‌ಗೆ ಸಹ ಚಾಲನೆ ನೀಡಿದರು. ಈ ಡ್ಯಾಶ್‌ಬೋರ್ಡ್ ಅನ್ನು ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ ಅಭಿವೃದ್ಧಿಪಡಿಸಿದೆ. ಭೌತಿಕ ಮತ್ತು ವರ್ಚುವಲ್ ಮೋಡ್‌ಗಳನ್ನು ಸಂಯೋಜಿಸುವ ಹೈಬ್ರಿಡ್ ಸ್ವರೂಪದಲ್ಲಿ ನಡೆಯುತ್ತಿರುವ ಸಮ್ಮೇಳನದಲ್ಲಿ ದೇಶಾದ್ಯಂತ ೭೫೦ಕ್ಕೂ ಹೆಚ್ಚು ಅಧಿಕಾರಿಗಳು ಭಾಗವಹಿಸುತ್ತಿದ್ದಾರೆ. ಇದಕ್ಕೂ ಮುನ್ನ ಗೃಹ ಸಚಿವರು ಹುತಾತ್ಮರ ಸ್ತಂಭಕ್ಕೆ ಪುಷ್ಪಾರ್ಚನೆ ಮಾಡಿ, ಕರ್ತವ್ಯದ ವೇಳೆ ತ್ಯಾಗ ಬಲಿದಾನ ಮಾಡಿದ ವೀರ ಯೋಧರಿಗೆ ನಮನ ಸಲ್ಲಿಸಿದರು.

<><*<><>*><>

'ನಮ್ಮ ದೇಶವನ್ನು ನೋಡು ಜನರ ಆಯ್ಕೆ- ೨೦೨೪' ಅಭಿಯಾನ ಈ ತಿಂಗಳ ೧೫ರ ವರೆಗೆ ಮುಂದುವರೆಯಲಿದೆ. ದೇಶದ ಪ್ರಮುಖ ಮತ್ತು ಆಕರ್ಷಣೀಯ ಪ್ರವಾಸಿ ತಾಣಗಳನ್ನು ನಾಗರೀಕರ ಸಹಭಾಗಿತ್ವದಲ್ಲಿ ಗುರುತಿಸುವ ದೇಖೊ ಅಪ್ನಾ ದೇಶ್, ಪೀಪಲ್ ಚಾಯ್ಸ್ ಅಭಿಯಾನದಡಿ ಭಾಗವಹಿಸಿ ಪ್ರಶ್ನೆಗಳಿಗೆ ಉತ್ತರ ನೀಡುವ ಮೂಲಕ ಬಹುಮಾನಗಳನ್ನು ಗೆಲ್ಲಲು ಅವಕಾಶ ಕಲ್ಪಿಸಲಾಗಿದೆ. ಧಾರ್ಮಿಕ, ಸಾಂಸ್ಕೃತಿಕ, ಪಾರಂಪರಿಕ, ನೈಸರ್ಗಿಕ, ವನ್ಯಜೀವಿ, ಸಾಹಸ

ಪ್ರವಾಸೋದ್ಯಮ ಒಳಗೊಂಡಂತೆ ಐದು ವಿಭಾಗಗಳಲ್ಲಿ ನೆಚ್ಚಿನ ಪ್ರವಾಸಿ ತಾಣಗಳ ಬಗ್ಗೆ ಅಭಿಯಾನದಡಿ ಮಾಹಿತಿ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರವಾಸೋದ್ಯಮ ತಾಣಗಳನ್ನು ಹೆಚ್ಚಿಸಲು ಈ ಕ್ರಮ ಕೈಗೊಳ್ಳಲಾಗಿದೆ. ಪ್ರವಾಸೋದ್ಯಮ ಸಚಿವಾಲಯದ ಅಧಿಕೃತ ಜಾಲತಾಣದ ಪೋರ್ಟಲ್‌ನಲ್ಲಿ ನೆಚ್ಚಿನ ತಾಣಗಳ ಬಗ್ಗೆ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ. ಶ್ರೀನಗರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಈ ಅಭಿಯಾನಕ್ಕೆ ಚಾಲನೆ ನೀಡಿದ್ದರು. ಇದಲ್ಲದೆ, ಚಿರಪರಿಚಿತವಲ್ಲದ ಪ್ರವಾಸಿ ತಾಣಗಳಾದ ಉಜ್ವಲ ಗಡಿ ಗ್ರಾಮಗಳು, ಯೋಗಕ್ಷೇಮ ಪ್ರವಾಸೋದ್ಯಮ, ವಿವಾಹ ಪ್ರವಾಸೋದ್ಯಮ ವಲಯಗಳಲ್ಲೂ ಮತದಾನ ಮಾಡಲು ಅವಕಾಶ ನೀಡಲಾಗಿದೆ. ಸಾಂಸ್ಕೃತಿಕವಾಗಿ ಗುರುತಿಸಲ್ಪಟ್ಟಿರುವ ಮೈಲಿಗಲ್ಲಿನ ತಾಣಗಳು, ಸಾಂಪ್ರಾದಾಯಿಕವಾಗಿ ಮಹತ್ವ ಪಡೆದ ಪ್ರದೇಶಗಳು ಸಹ ಈ ವ್ಯಾಪ್ತಿಗೆ ಒಳಪಟ್ಟಿವೆ.

<><*<><>*><>

ಜಮ್ಮು ಮತ್ತು ಕಾಶ್ಮೀರದ ಕಿಶ್ತ್ವಾರ್ ಜಿಲ್ಲೆಯಲ್ಲಿ ಭಯೋತ್ಪಾದಕರೊಂದಿಗಿನ ಎನ್‌ಕೌಂಟರ್‌ನಲ್ಲಿ ನಾಲ್ವರು ಸೇನಾ ಸಿಬ್ಬಂದಿ ಗಾಯಗೊಂಡಿದ್ದಾರೆ. ಖಚಿತ ಮಾಹಿತಿ ಮೇರೆಗೆ ಭದ್ರತಾ ಪಡೆಗಳು ಕಿಶ್ತ್ವಾರ್ ಜಿಲ್ಲೆಯ ಛತ್ರೂ ಬೆಲ್ಟ್‌ನ ನೈದ್‌ಗಾಮ್ ಪ್ರದೇಶದಲ್ಲಿ ನಿನ್ನೆ ಜಂಟಿ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದವು. ಕಾರ್ಯಾಚರಣೆಯ ಸಮಯದಲ್ಲಿ, ನೈದ್‌ಗಾಮ್ ಗ್ರಾಮದ ಸಮೀಪದ ಪಿಂಗ್ನಾಲ್ ದುಗಡ್ಡಾ ಅರಣ್ಯ ಪ್ರದೇಶದಲ್ಲಿ ಭದ್ರತಾ ಪಡೆಗಳು ಮತ್ತು ಜೈಶ್-ಎ-ಮೊಹಮ್ಮದ್ ಉಗ್ರರ ನಡುವೆ ಗುಂಡಿನ ಚಕಮಕಿ ನಡೆಯಿತು. ಈ ವೇಳೆ ನಾಲ್ವರು ಭದ್ರತಾ ಸಿಬ್ಬಂದಿ ಗಾಯಗೊಂಡರು. ಭಯೋತ್ಪಾದಕರ ವಿರುದ್ಧ ಕಾರ್ಯಾಚರಣೆ ಮುಂದುವರಿದಿದೆ.

<><*<><>*><>

ಚೀನಾದ ಹುಲುನ್‌ಬುಯರ್‌ನಲ್ಲಿ ನಡೆಯುತ್ತಿರುವ ಪುರುಷರ ಏಷ್ಯನ್ ಚಾಂಪಿಯನ್ಸ್ ಹಾಕಿ ಟ್ರೋಫಿ ಟೂರ್ನಿಯ ಐದನೇ ಮತ್ತು ಅಂತಿಮ ಪೂಲ್ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಭಾರತವು ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಇಂದು ಎದುರಿಸಲಿದೆ. ಪಂದ್ಯವು ಭಾರತೀಯ ಕಾಲಮಾನ ಮಧ್ಯಾಹ್ನ ೧:೧೫ ಕ್ಕೆ ಪ್ರಾರಂಭವಾಗಲಿದೆ. ನಾಲ್ಕು ಬಾರಿಯ ಚಾಂಪಿಯನ್ ಭಾರತ, ಈಗಾಗಲೇ ದಕ್ಷಿಣ ಕೊರಿಯಾ ವಿರುದ್ಧ ಲೀಗ್ ಹಂತದಲ್ಲಿ ಸತತ ನಾಲ್ಕನೇ ಜಯ ಸಾಧಿಸಿ ಸೆಮಿಫೈನಲ್‌ಗೆ ಅರ್ಹತೆ ಪಡೆದಿದೆ. ಇಲ್ಲಿಯವರೆಗೆ ಪಂದ್ಯಾವಳಿಯಲ್ಲಿ ಅಜೇಯವಾಗಿ ಉಳಿದಿರುವ ಹರ್ಮನ್‌ಪ್ರೀತ್ ಸಿಂಗ್ ನೇತೃತ್ವದ ತಂಡವು ಪ್ರಸ್ತುತ ಹನ್ನೆರಡು ಅಂಕಗಳೊಂದಿಗೆ ಅಂಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ಆರು ತಂಡಗಳ ಪಂದ್ಯಾವಳಿಯು ರೌಂಡ್-ರಾಬಿನ್ ಮಾದರಿಯಲ್ಲಿ ನಡೆಯುತ್ತಿದ್ದು, ಅಗ್ರ ನಾಲ್ಕು ತಂಡಗಳು ಇದೇ ೧೬ ರಂದು ಸೆಮಿಫೈನಲ್‌ಗೆ ಅರ್ಹತೆ ಪಡೆಯುತ್ತವೆ. ಇದೇ ೧೭ ರಂದು ಫೈನಲ್ ಪಂದ್ಯ ನಡೆಯಲಿದೆ.

<><*<><>*><>

ಬೆಲ್ಜಿಯಂನ ಬ್ರುಸೆಲ್ಸ್‌ನಲ್ಲಿ ಇಂದಿನಿಂದ ಆರಂಭವಾಗಲಿರುವ ೨೦೨೪ರ ಡೈಮಂಡ್ ಲೀಗ್ ಫೈನಲ್‌ನಲ್ಲಿ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಇಂದು ಬೆಳ್ಳಿ ಪದಕ ವಿಜೇತ ಭಾರತದ ಜಾವೆಲಿನ್ ಎಸೆತಗಾರ ನೀರಜ್ ಚೋಪ್ರಾ ಸ್ಪರ್ಧಿಸಲಿದ್ದಾರೆ. ವಿಶ್ವದ ಅಗ್ರಮಾನ್ಯ ಅಥ್ಲೀಟ್ಸ್‌ಗಳು ಡೈಮಂಡ್ ಲೀಗ್‌ನಲ್ಲಿ ಪಾಲ್ಗೊಳ್ಳಲಿದ್ದು, ತಮ್ಮ ತಮ್ಮ ವಿಭಾಗಗಳಲ್ಲಿ ಜಯಶಾಲಿಯಾಗಲು ಪೈಪೋಟಿ

ನಡೆಸಲಿದ್ದಾರೆ. ನೀರಜ್ ಚೋಪ್ರಾ, ಜಾವೆಲಿನ್ ಸ್ಪರ್ಧೆಯ ಫೈನಲ್‌ನಲ್ಲಿ ತಮ್ಮ ಸಾಮರ್ಥ್ಯ ಪ್ರದರ್ಶಿಸಲಿದ್ದಾರೆ. ಪ್ರಸ್ತುತ್ ನೀರಜ್ ೧೪ ಅಂಕಗಳೊಂದಿಗೆ ೪ನೇ ಸ್ಥಾನದಲ್ಲಿದ್ದಾರೆ. ಗ್ರೆನಡಾದ ಆಂಡರ್ಸನ್ ಪೀಟರ್ಸ್ ಹಾಗೂ ಜರ್ಮನಿಯ ಜೂಲಿಯನ್ ವೆಬರ್ ಕಠಿಣ ಪ್ರತಿಸ್ಪರ್ಧಿಗಳಾಗಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ಮಧ್ಯರಾತ್ರಿ ೧.೫೦ಕ್ಕೆ ಸ್ಪರ್ಧೆ ಆರಂಭವಾಗಲಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ **<>*><>**